# ಮೈಸೂರು ವಿಶ್ವವಿದ್ಯಾನಿಲಯ

Estd 1916

(Re-accredited by NAAC with CGPA 3.47 on four point scale with A Grade)

ಸಂಖ್ಯೆ: ಪವಿ/8.6/07/ಅಧಿಸೂಚನೆ/2010-11

ಕುಲಸಚಿವ (ಪರೀಕ್ಷಾಂಗ) ರವರ ಕಛೇರಿ,
ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ ಮೈಸೂರು-570 005,

ದಿನಾಂಕ : **04.09.2015**

## <u>ಅ ಧಿ ಸೂ ಚ ನೆ</u>

ವಿಷಯ: **ನವೆಂಬರ್/ಡಿಸೆಂಬರ್ 2015**ರಲ್ಲಿ ನಡೆಯಲಿರುವ **1, 3 ಮತ್ತು 5 ನೇ** ಸೆಮಿಸ್ಟರ್‌ನ ಪದವಿ ಪರೀಕ್ಷೆಗಳ ಬಗ್ಗೆ.

ಉಲ್ಲೇಖ: 1. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಅವರ ಅಧಿಸೂಚನೆ ಸಂಖ್ಯೆ:ಎಸಿ7(ಎ)/463/2013-14 ದಿನಾಂಕ 17.06.2015.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಅವರ ಅಧಿಸೂಚನೆ ಸಂಖ್ಯೆ:ಎಸಿ2(ಎಸ್)/383/2014-15 ದಿನಾಂಕ 02.05.2015.
3. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಅವರ ಅಧಿಸೂಚನೆ ಸಂಖ್ಯೆ:ಎಸಿ2(ಎಸ್)/34/1990-91 ದಿನಾಂಕ 31.12.2014

******

**ನವೆಂಬರ್/ಡಿಸೆಂಬರ್ 2015**ರ ಮಾಹೆಯಲ್ಲಿ ನಡೆಯಲಿರುವ **1, 3 ಮತ್ತು 5** ನೇ ಸೆಮಿಸ್ಟರ್ ಮತ್ತು ವಾರ್ಷಿಕ ಪದ್ಧತಿಯ ಪರೀಕ್ಷೆಗಳು **ಬಿ.ಎ., ಬಿ.ಎಸ್ಸಿ., ಬಿ.ಕಾಂ., ಬಿ.ಬಿ.ಎಂ. ಬಿ.ಎಸ್.ಡಬ್ಲ್ಯೂ., ಬಿ.ಎಸ್ಸಿ.,(F.C.Sc)., ಬಿ.ಟಿ.ಹೆಚ್, ಬಿ.ಎಸ್ಸಿ. (ವಾಕ್ ಮತ್ತು ಶ್ರವಣ) ಬಿ.ಎಸ್.ಎಡ್., (H & I) ಬಿ.ಎಚ್.ಎಂ.,(ಐ.ಎಸ್.ಎಸ್. ಸ್ಕೀಂ), ಬಿ.ಪಿ.ಎ, ಬಿ.ಎಫ್.ಎ., ಬಿ.ಸಿ.ಎಸ್., ಮತ್ತು ಬಿ.ಸಿ.ಎ.** ಪದವಿಗಳ ಪರೀಕ್ಷೆಗಳು <u>ದಿನಾಂಕ 17.11.2015 ರಿಂದ **ಆರಂಭವಾಗಲಿವೆ.**</u>

1. ಪರೀಕ್ಷಾ ವಿಭಾಗದಿಂದ ಕಾಲೇಜುಗಳಿಗೆ ಖಾಲಿ ಅರ್ಜಿ ಫಾರಂಗಳನ್ನು ಕಳುಹಿಸಲು ಕೊನೆಯ ದಿನಾಂಕ : **15.09.2015**
2. ಪರೀಕ್ಷಾ ಶುಲ್ಕವನ್ನು ಪಾವತಿ ಮಾಡಲು ಮತ್ತು ಭರ್ತಿಮಾಡಿದ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು ಕೊನೆಯ ದಿನಾಂಕ : **05.10.2015**
3. ಪರೀಕ್ಷಾ ಶುಲ್ಕವನ್ನು ಚಲನ್ ಮೂಲಕ ಪರೀಕ್ಷಾ ಖಾತೆಗೆ **<u>ಪರೀಕ್ಷಾ ಖಾತೆ ಸಂಖ್ಯೆ:54007591200 (Examination Account)</u>** SBM University Campus, Mysore ಗೆ ಪಾವತಿಸಿ ನಂತರ ಚಲನ್ ಪ್ರತಿಯನ್ನು ಈ ಕಛೇರಿಗೆ ಕಳುಹಿಸಲು ಕೊನೆಯ ದಿನಾಂಕ : **21.10.2015**
4. ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಗಳನ್ನು ಕಾಲೇಜಿನವರು ಭರ್ತಿ ಮಾಡಲು ಕೊನೆ ದಿನಾಂಕ *(ಪರೀಕ್ಷಾ ಪ್ರಕ್ರಿಯೆಗಳ ಹೊರಗುತ್ತಿಗೆ ಕಾರ್ಯವನ್ನು ಬೇರೊಂದು ಏಜೆನ್ಸಿಯವರಿಗೆ ನೀಡಿರುವುದರಿಂದ ಆನ್‌ಲೈನ್ ಪ್ರಕ್ರಿಯೆ ಬಗ್ಗೆ ವಿವರಗಳನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು) : **17.10.2015**
5. ಪ್ರವೇಶ ಪತ್ರಗಳನ್ನು ಮುದ್ರಿಸಿಕೊಂಡು ವಿಶ್ವವಿದ್ಯಾನಿಲಯ ದ ಅನುಮೋದನೆ ಪಡೆಯಲು ದಿನಾಂಕ : **21.10.2015** ರಿಂದ **31.10.2015**
   (ಆನ್‌ಲೈನ್ ಮೂಲಕ ಅಭ್ಯರ್ಥಿನಾ ಪಟ್ಟಿಯನ್ನು ಮುದ್ರಿಸಿ ಪ್ರಾಂಶುಪಾಲರ ಸಹಿ ಪಡೆದು ಒಂದು ಪ್ರತಿಯನ್ನು ಪ್ರವೇಶ ಪತ್ರಗಳ ಜೊತೆಯಲ್ಲಿ ಕುಲಸಚಿವ (ಪರೀಕ್ಷಾಂಗ) ಅವರಿಗೆ ಸಲ್ಲಿಸಬೇಕು)
6. ಆನ್‌ಲೈನ್ ಮೂಲಕ **IA** ಅಂಕಗಳನ್ನು ಎಂಟ್ರಿ ಮಾಡಲು ಕೊನೆ ದಿನಾಂಕ : **14.11.2015**
7. IA ಅಂಕಗಳನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ದಿನಾಂಕ : ಮುಂದೆ ತಿಳಿಸಲಾಗುವುದು
8. ವಿದ್ಯಾರ್ಥಿಗಳು ಅಂಕಗಳನ್ನು ವೆಬ್‌ಸೈಟ್‌ನಲ್ಲಿ ಪರಿಶೀಲಿಸಿದ ನಂತರ ತಿದ್ದುಪಡಿ ಇದ್ದಲ್ಲಿ : -"-
   ಪ್ರಾಂಶುಪಾಲರುಗಳು ಲಿಖಿತ ಮೂಲಕ ಅವುಗಳನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ : -"-
9. **ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ** : **17.11.2015**

.......2

ಪ್ರಾಯೋಗಿಕ ಪರೀಕ್ಷೆಗಳನ್ನು ದಿನಾಂಕ : **19.10.2015** ರಿಂದ ಅಥವಾ ನಂತರ ಪ್ರಾರಂಭಿಸಿ ದಿನಾಂಕ **14.11.2015** ರೊಳಗೆ ಪೂರ್ಣಗೊಳಿಸುವುದು. ಅನಿವಾರ್ಯ ಸಂದರ್ಭಗಳಲ್ಲಿ ಕುಲಸಚಿವ (ಪರೀಕ್ಷಾಂಗ), ಅವರ ಪೂರ್ವಾನುಮತಿಯೊಂದಿಗೆ ಪರೀಕ್ಷಾ ದಿನಾಂಕವನ್ನು ನಿರ್ಧರಿಸಬಹುದು.

ಎಲ್ಲಾ ಪದವಿ ವಿದ್ಯಾರ್ಥಿಗಳ ಆಂತರಿಕ ಮೌಲ್ಯಮಾಪನ ಅಂಕಗಳನ್ನು ಕಾಲೇಜಿನ ಇಂಟರ್‌ನೆಟ್ ಸೌಲಭ್ಯವನ್ನು ಬಳಸಿ ನೇರವಾಗಿ ವಿಶ್ವವಿದ್ಯಾನಿಲಯದ **Web Server**ಗೆ ಮಾಹಿತಿಯನ್ನು ವರ್ಗಾವಣೆ (**Online Transmission**) ಮಾಡುವಂತೆ ತಿಳಿಸಲಾಗಿದೆ. ಹಾಗೂ ಅನಿವಾರ್ಯ ಕಾರಣದಿಂದಾಗಿ ಕಾಲೇಜಿನಲ್ಲಿ ಇಂಟರ್‌ನೆಟ್ ಸೌಲಭ್ಯವಿಲ್ಲದಿದ್ದ ಪಕ್ಷದಲ್ಲಿ ಸ್ಥಳೀಯವಾಗಿ ಲಭ್ಯವಿರುವ ಯಾವುದೇ ಕಂಪ್ಯೂಟರ್ ಕೇಂದ್ರದಿಂದಲೂ ಮಾಹಿತಿ ರವಾನಿಸಬಹುದಾಗಿದೆ.

## ಪರೀಕ್ಷಾ ಶುಲ್ಕಗಳ ದರಗಳು

5. **B.A./B.P.A./B.Com/BCS :**

| | |
|---|---|
| a) I and II Year/ II, IV Semester whole Examination | Rs.600-00 |
| Per paper with Practical | Rs.385-00 |
| Per paper without Practical/Skill Development | Rs.305-00 |
| b) III Year/ VI Semester whole Examination | Rs. 715-00 |
| Per paper with Practical | Rs. 385-00 |
| Per paper without Practical | Rs. 305-00 |

6. **B.Sc./B.Sc. (Family & Community Science)/BCA :**

| | |
|---|---|
| a) I and II Year/ II, IV Semester whole Examination | Rs. 680-00 |
| Per paper with Practical | Rs. 385-00 |
| Per paper without Practical | Rs. 305-00 |
| b) III Year/ VI Semester whole Examination | Rs.750-00 |
| Per paper with Practical | Rs.385-00 |
| Per paper without Practical | Rs.305-00 |

7. **B.F.A./B.B.M./B.S.W./B.Sc.(Speech & Hearing) & B.S.Ed (H & I) :**

| | |
|---|---|
| Whole Examination (per semester) | Rs.900-00 |
| Per paper with Practical | Rs.530-00 |
| Per paper without Practical | Rs.305-00 |

8. **B.T.H./B.H.M :**

| | |
|---|---|
| Whole Examination (per semester) | Rs. 1,725-00 |
| Per paper with Practical | Rs. 530-00 |
| Per paper without Practical | Rs. 305-00 |

***Subject to a maximum of whole examination Fee fixed per semester/Annual Scheme.***

**NOTE:** For Science subjects in Semester Scheme wherever Practical exemption is there, Examination fee is same as that of per paper with out Practical/Skill Development.

**ಸೂಚನೆ:**

1. ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕಗಳನ್ನು ಯಾವುದೇ ಕಾರಣಕ್ಕಾಗಿ ವಿಸ್ತರಿಸಲಾಗುವುದಿಲ್ಲ.
2. ಪ್ರತಿಯೊಬ್ಬ ಅಭ್ಯರ್ಥಿಯೂ ಪ್ರತಿಯೊಂದು ಚಾತುರ್ಮಾಸ/ವರ್ಷದ ಪರೀಕ್ಷೆಗೆ ಮೇಲೆ ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ಜೊತೆಗೆ ಪರೀಕ್ಷೆಯ ಅಂಕಪಟ್ಟಿ ಶುಲ್ಕ **ರೂ.215-00**ನ್ನು ಸಹ ಪಾವತಿಸತಕ್ಕದ್ದು. ಪರೀಕ್ಷಾ ಅರ್ಜಿಗೆ ಪ್ರತ್ಯೇಕ ಶುಲ್ಕವಿರುವುದಿಲ್ಲ.
3. ಉಲ್ಲೇಖ(6)ರ ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ ಸಂಖ್ಯೆ: ವಿಘ/1/9/2013-14, ದಿನಾಂಕ 25.09.2013 ಪ್ರಕಾರ 2013-14 ನೇ ಶೈಕ್ಷಣಿಕ ಸಾಲಿನಿಂದ ಪದವಿ/ಡಿಪ್ಲೊಮಾ ಕೋರ್ಸ್‌ಗಳಲ್ಲಿ ಪ್ರವೇಶಾತಿ ಪಡೆದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ ರೂ.**2.5** ಲಕ್ಷದೊಳಗಿರುವ ವಿದ್ಯಾರ್ಥಿಗಳಿಂದ ಪ್ರವೇಶಾತಿ ಶುಲ್ಕ, ಬೋಧನಾ ಶುಲ್ಕ, ಪ್ರಮಾಣ ಪತ್ರ ಶುಲ್ಕ, ಅಂಕಪಟ್ಟಿ ಶುಲ್ಕ ಮತ್ತು ಅಂತಿಮ ಪದವಿ ಪ್ರಮಾಣ ಪತ್ರದ ಶುಲ್ಕಗಳನ್ನು ಕಟ್ಟಿಸಿಕೊಳ್ಳಬಾರದೆಂದು ಸರ್ಕಾರದ ಆದೇಶವಿರುತ್ತದೆ. ಇದರಂತೆ ಕ್ರಮತೆಗೆದುಕೊಳ್ಳುವುದು.

........3

4. ಪ್ರವರ್ಗ-1 ಮತ್ತು ಇತರೆ ವರ್ಗಗಳಿಗೆ (ಸಾಮಾನ್ಯ ವರ್ಗದವರನ್ನು ಒಳಗೊಂಡಂತೆ) ಸೇರಿದ ಅಭ್ಯರ್ಥಿಗಳಿಗೆ ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ಪಡೆಯಲು ಅರ್ಹರಾದ ಅವರ ಪೋಷಕರ ವಾರ್ಷಿಕ ವರಮಾನದ ಆಧಾರದ ಮೇಲೆ ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಆದರೂ, ಅಂತಹ ಅಭ್ಯರ್ಥಿಗಳು ನಿಗದಿಪಡಿಸಿದಂತೆ, ಅಂಕಪಟ್ಟಿ ಶುಲ್ಕ **ರೂ.215-00** ಗಳನ್ನು ಪಾವತಿ ಮಾಡಬೇಕು.
5. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ ಅವರ ಪತ್ರ ಸಂಖ್ಯೆ ಎಸಿ2/182/92-93 ದಿನಾಂಕ 15-10-1999ರ ಪತ್ರದಲ್ಲಿ ತಿಳಿಸಿರುವ ರೀತ್ಯಾ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಹಾಗೂ ಕ್ಯಾಟಗರಿ – 1 ರ ವರ್ಗದ ವಿದ್ಯಾರ್ಥಿಗಳು ತಮ್ಮ ಕೋರ್ಸನ್ನು ಮುಗಿಸಿದ ನಂತರ ರಿಪೀಟರ್ಸ್ ಆಗಿ ಪರೀಕ್ಷೆಗಳನ್ನು ತೆಗೆದುಕೊಂಡಲ್ಲಿ, ಅಂತಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಮತ್ತು ಇತರ ಶುಲ್ಕಗಳನ್ನು ತಪ್ಪದೆ ವಸೂಲು ಮಾಡಬೇಕೆಂದು ತಿಳಿಸಲಾಗಿದೆ. ಆದುದರಿಂದ ಇಂತಹ ವಿದ್ಯಾರ್ಥಿಗಳು ಶುಲ್ಕವನ್ನು ತಪ್ಪದೆ ಪಾವತಿಸುವುದು.
6. **ಪಾವತಿಸಬೇಕಾದ ಒಟ್ಟು ಶುಲ್ಕವನ್ನು ಪರೀಕ್ಷಾ ಖಾತೆ ಸಂಖ್ಯೆ:54007591200 (Examination Account) ಚಲನ್‌ನಲ್ಲಿ (Challan) ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ವಿಶ್ವವಿದ್ಯಾನಿಲಯ ಶಾಖೆ, ಮೈಸೂರು ಇಲ್ಲಿ ಸಂದಾಯ ಮಾಡಿ ಮೂಲ ಪ್ರತಿಯನ್ನು ಈ ಕಛೇರಿಗೆ ಸಲ್ಲಿಸುವುದು.**
7. ವಿಶ್ವವಿದ್ಯಾನಿಲಯಕ್ಕೆ ಚಲನ್ ಮುಖಾಂತರ ಹಣ ಸಂದಾಯಮಾಡುವ ಸಂದರ್ಭದಲ್ಲಿ ಸೆಮಿಸ್ಟರ್‌ವಾರು ಅಂಕಪಟ್ಟಿ ಶುಲ್ಕ, ಪರೀಕ್ಷಾ ಶುಲ್ಕ ಮತ್ತು ಪದವಿಪತ್ರ ಶುಲ್ಕವನ್ನು ಪ್ರತ್ಯೇಕವಾಗಿ ನಮೂದಿಸಿ ವಿವರಣೆಯೊಂದಿಗೆ ಸಲ್ಲಿಸಬೇಕು.
8. ಅಭ್ಯರ್ಥನಾ ಪಟ್ಟಿಯ ಪ್ರತಿ ಪುಟದಲ್ಲಿ ಒಟ್ಟಾರೆ ಶುಲ್ಕವನ್ನು ಕ್ರೋಢೀಕರಿಸಿ ಅದನ್ನು ಮುಂದಿನ ಪುಟಕ್ಕೆ ಮುಂದುವರೆಸಿ ಕೊನೆ ಪುಟದಲ್ಲಿ ಒಟ್ಟಾರೆ ಸಂದಾಯವಾಗಬೇಕಿರುವ ಶುಲ್ಕವನ್ನು ನಮೂದಿಸಬೇಕು.
9. ಶುಲ್ಕವನ್ನು ನಗದು/ಚೆಕ್ ಇತ್ಯಾದಿಗಳ ಮೂಲಕ ಸ್ವೀಕರಿಸಲಾಗುವುದಿಲ್ಲ. ಆದರೆ ಅಭ್ಯರ್ಥಿಗಳಿಂದ ನಗದಾಗಿ ಪಡೆದ ಒಟ್ಟು ಶುಲ್ಕಕ್ಕೆ ಮೇಲೆ ತಿಳಿಸಿರುವ ದಿನಾಂಕದೊಳಗಾಗಿ ಚಲನ್ ಮೂಲಕ ಹಣ ಸಂದಾಯ ಮಾಡಿ ಚಲನ್‌ನ ಪ್ರತಿಯನ್ನು ಕುಲಸಚಿವ (ಪರೀಕ್ಷಾಂಗ) ಇವರಿಗೆ ಕಳುಹಿಸುವ ಜವಾಬ್ದಾರಿ ಕಾಲೇಜಿನ ಪ್ರಾಂಶುಪಾಲರಿಗೆ ಇರುತ್ತದೆ.
10. **ಪರೀಕ್ಷೆಗಳನ್ನು ರದ್ದುಪಡಿಸಿರುವ ಪರೀಕ್ಷಾ ಕೇಂದ್ರಗಳನ್ನು ಹೊರತುಪಡಿಸಿ ಆಯಾಯಾ ಕಾಲೇಜನ್ನೇ ಪರೀಕ್ಷಾ ಕೇಂದ್ರವನ್ನಾಗಿ ನಿಗದಿಪಡಿಸಲಾಗಿದೆ (ಅಡಕ 'ಅ') ಹಾಗೂ ಆಯಾಯಾ ಕಾಲೇಜಿನ ಪ್ರಾಂಶುಪಾಲರನ್ನು ಮುಖ್ಯ ಪರೀಕ್ಷಾ ಅಧೀಕ್ಷಕರನ್ನಾಗಿ ನೇಮಿಸಲಾಗಿದೆ. ಇದಕ್ಕೆ ಪ್ರತ್ಯೇಕ ಆದೇಶವನ್ನು ಹೊರಡಿಸಲಾಗುವುದಿಲ್ಲ.**
11. ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಪೋಷಕರ ಆದಾಯ **ರೂ.2.5 ಲಕ್ಷಗಳು ಮೀರಿದ್ದಲ್ಲಿ ಅವರುಗಳಿಂದ ಪೂರ್ಣ ಪರೀಕ್ಷಾ ಶುಲ್ಕ ಸಂಗ್ರಹಿಸುವುದು.**
12. ಸರ್ಕಾರದ ಅಧೀನ ಕಾರ್ಯದರ್ಶಿ-1, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು, ಇವರ ತಿದ್ದುಪಡಿ ಮತ್ತು ಸೇರ್ಪಡೆ ಆದೇಶ ಸಂಖ್ಯೆ:ಹಿಂವಕ 589 ಬಿಎಂಎಸ್ 2013, ದಿನಾಂಕ 06.08.2014 ಮತ್ತು ಉಲ್ಲೇಖ (6)ರ ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ ಸಂಖ್ಯೆ:ಜಿಎಲ್.3/170/2014-15 ದಿನಾಂಕ 13.08.2014 ರಲ್ಲಿ ಸರ್ಕಾರಿ ಆದೇಶದನ್ವಯ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ನಿಗದಿತ ಆದಾಯದ ಮಿತಿಯೊಳಗಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರವನ್ನು ತಾವು ಪ್ರವೇಶ ಪಡೆಯುವ ಕಾಲೇಜು/ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಸಮಯದಲ್ಲಿ ಸಲ್ಲಿಸಿದ್ದಲ್ಲಿ, ಅಂತಹ ಕಾಲೇಜು/ಶಿಕ್ಷಣ ಸಂಸ್ಥೆಗಳು ಸರ್ಕಾರವು ಕಾಲೇಜುಗಳಿಗೆ ನಿಗದಿಪಡಿಸಿದ ಬೋಧನಾ ಶುಲ್ಕ, ಪರೀಕ್ಷಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಮತ್ತು ಗ್ರಂಥಾಲಯ ಶುಲ್ಕಗಳನ್ನು ವಸೂಲಿ ಮಾಡದೇ ವಿನಾಯಿತಿ ನೀಡಿ ಪ್ರವೇಶಾತಿ ನೀಡುವುದು.

ನಂತರ ಮೇಲಿನಂತೆ ವಿನಾಯಿತಿ ನೀಡಿರುವ ಶುಲ್ಕಗಳನ್ನು ಮರುಪಾವತಿಸುವಂತೆ ಸಂಬಂಧಪಟ್ಟ ಕಾಲೇಜು/ಶಿಕ್ಷಣ ಸಂಸ್ಥೆಗಳು ಆನ್‌ಲೈನ್ ಮೂಲಕ ವಿದ್ಯಾರ್ಥಿಗಳಿಂದ ಸ್ವೀಕರಿಸಲಾದ ಅರ್ಜಿಗಳನ್ನು ಪರಿಶೀಲಿಸಿ, ಕ್ರೋಢೀಕೃತ ಪಟ್ಟಿಯೊಂದಿಗೆ ಪ್ರಸ್ತಾವನೆಯನ್ನು ಶುಲ್ಕ ವಿನಾಯಿತಿ ಮಂಜೂರಾತಿ ಪ್ರಾಧಿಕಾರಿಗಳಿಗೆ ಸಲ್ಲಿಸುವುದು. ಸರ್ಕಾರಿ ಆದೇಶಾನುಸಾರ ಶುಲ್ಕ ವಿನಾಯಿತಿ ನೀಡಿರುವ ವಿದ್ಯಾರ್ಥಿಗಳ ಮರುಭರಿಕೆ ಶುಲ್ಕಗಳನ್ನು ಸಂಬಂಧಿಸಿದ ಇಲಾಖೆಯಿಂದ ನಿಗದಿತ ಅವಧಿಯೊಳಗೆ ಮರುಭರಿಕೆ ಮಾಡಿಕೊಳ್ಳುವುದು ಸಂಬಂಧಿಸಿದ ಬಟವಾಡೆ ಅಧಿಕಾರಿಗಳ ಜವಾಬ್ದಾರಿಯಾಗಿರುತ್ತದೆ.

......4

1. ವಿಶ್ವವಿದ್ಯಾನಿಲಯದ ಅಧಿಸೂಚನೆ ಸಂಖ್ಯೆ:ಎಸಿ2(ಎಸ್)/34/1990-91 ದಿನಾಂಕ 31.12.2014ರ ಅನ್ವಯ, ವಿದ್ಯಾರ್ಥಿಗಳು ತಮ್ಮ ಪದವಿಯ ಎರಡು ಪಟ್ಟು ಅವಧಿಯ ನಂತರ ಪರೀಕ್ಷೆಗೆ ಕುಳಿತುಕೊಳ್ಳಲು **Odd Semester ವಿದ್ಯಾರ್ಥಿಗಳಿಗೆ ಈ ಬಾರಿಗೆ ಮಾತ್ರ ಕೊನೆಯ ಅವಕಾಶವಾಗಿದೆ.** ಈ ಹೆಚ್ಚುವರಿ ಅವಕಾಶ ಸೌಲಭ್ಯ ಪಡೆಯುವಂತಹ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕವು ಸಾಮಾನ್ಯ ಪರೀಕ್ಷಾ ಶುಲ್ಕಕ್ಕಿಂತ ನಾಲ್ಕು ಪಟ್ಟು ಜಾಸ್ತಿ ಇರುತ್ತದೆ (ಪ್ರತಿ ಲಗತ್ತಿಸಿದೆ).
2. **ವಾರ್ಷಿಕ ಪದ್ಧತಿಯ ವಿದ್ಯಾರ್ಥಿಗಳಿಗೂ ಪರೀಕ್ಷಾ ಶುಲ್ಕ ಪಾವತಿ ಮಾಡಲು ಈ ಅಧಿಸೂಚನೆಯಲ್ಲಿ ತಿಳಿಸಿರುವ ದಿನಾಂಕವೇ ಆಗಿರುತ್ತದೆ.**
3. **ವಾರ್ಷಿಕ ಪದ್ಧತಿಯ ಪರೀಕ್ಷೆಗಳ ವೇಳಾಪಟ್ಟಿಯನ್ನು ಮುಂದೆ ಪ್ರಕಟಿಸಲಾಗುವುದು.**

**ವಿಶೇಷ ಸೂಚನೆ:**

1. ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆಯಾಯಾ ಕಾಲೇಜಿನವರು ಪರೀಕ್ಷೆಗಳು ಪ್ರಾರಂಭವಾಗುವುದಕ್ಕೆ ಸಾಕಷ್ಟು ಮುಂಚಿತವಾಗಿ Online ಮೂಲಕ ಪಡೆದು, ಕುಲಸಚಿವ (ಪರೀಕ್ಷಾಂಗ) ಅವರ ಫ್ಯಾಸಿಮಿಲಿ ಹಾಕಿಸಿಕೊಳ್ಳಬೇಕು ಮತ್ತು ಕುಲಸಚಿವ(ಪ) ಅವರ ಫ್ಯಾಸಿಮಿಲಿ ಇಲ್ಲದೆ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಕೂರಿಸಕೂಡದು.
2. ಪರೀಕ್ಷಾ ಶುಲ್ಕವನ್ನು ಕಟ್ಟಲು ಹೆಚ್ಚು ಕಾಲಾವಕಾಶ ನೀಡಿರುವುದರಿಂದ ವಿದ್ಯಾರ್ಥಿಗಳಿಗೆ ಸೂಕ್ತ ತಿಳುವಳಿಕೆ ನೀಡಿ, **ದಿನಾಂಕ: 05.10.2015** ರೊಳಗೆ ಪರೀಕ್ಷಾ ಶುಲ್ಕವನ್ನು ಕಟ್ಟಿಸಬೇಕು. ಯಾವುದೇ ಕಾರಣಕ್ಕೂ ದಂಡಶುಲ್ಕದೊಡನೆ ಪರೀಕ್ಷಾಶುಲ್ಕ ಕಟ್ಟಲು ಹೆಚ್ಚುವರಿ ಕಾಲಾವಕಾಶ ನೀಡಲಾಗುವುದಿಲ್ಲ.
3. ಉಲ್ಲೇಖ (3)ರ ಈ ಕಛೇರಿ ಸುತ್ತೋಲೆ ಸಂಖ್ಯೆ:ಪವಿ.8.6/ಅಧಿಸೂಚನೆ/2010-11 ದಿನಾಂಕ 22.08.2014ರಲ್ಲಿ ತಿಳಿಸಿರುವಂತೆ ಶೈಕ್ಷಣಿಕ ಮಂಡಳಿ ಸಭೆಯ ತೀರ್ಮಾನದಂತೆ ನವೆಂಬರ್/ಡಿಸೆಂಬರ್ 2014ರ ಪರೀಕ್ಷೆಯಿಂದ ಪ್ರಾರಂಭಿಸಿ ಸಮ-ಸಮ, ಬೆಸ-ಬೆಸ ಕ್ರಮದಲ್ಲಿ ಪದವಿ ಸೆಮಿಸ್ಟರ್ ಕೋರ್ಸುಗಳಿಗೆ ಅಂದರೆ **ನವೆಂಬರ್/ಡಿಸೆಂಬರ್ ನಲ್ಲಿ 1,3,5 ನೇ ಸೆಮಿಸ್ಟರ್‌ಗಳಿಗೆ ಹಾಗೂ ಮೇ/ಜೂನ್‌ನಲ್ಲಿ 2,4,6ನೇ ಸೆಮಿಸ್ಟರ್‌ಗಳಿಗೆ** ಮಾತ್ರ ಪರೀಕ್ಷೆ ನಡೆಸಲಾಗುವುದು

**ವಿದ್ಯಾರ್ಥಿಗಳಿಗೆ ಸೂಚನೆಗಳು:**

1. ಲಿಖಿತ ಪರೀಕ್ಷೆಗಳಿಗಿಂತ ಮೊದಲೇ ವಾರ್ಷಿಕ ಹಾಗೂ ಸೆಮಿಸ್ಟರ್ ಪದ್ಧತಿಯ ಸೆಮಿಸ್ಟರ್‌ಗಳ (ಅಂದರೆ 1, 3 & 5) ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲಾಗುವುದು. ಪ್ರಾಯೋಗಿಕ ಪರೀಕ್ಷೆಗಳಿಗೆ ಸಂಬಂಧಿಸಿದ ವಿವರವಾದ ವೇಳಾಪಟ್ಟಿಯನ್ನು ಸಂಬಂಧಪಟ್ಟ ಕಾಲೇಜಿನ ಮುಖ್ಯ ಪರೀಕ್ಷಾ ಅಧೀಕ್ಷಕರು / ಕಾಲೇಜುಗಳ ಪ್ರಾಂಶುಪಾಲರುಗಳು ಪ್ರಕಟಿಸುವರು.
2. ಲಿಖಿತ ಪರೀಕ್ಷೆಗಳಿಗೆ ಸಂಬಂಧಪಟ್ಟ ವಿವರವಾದ ವೇಳಾಪಟ್ಟಿಯನ್ನು ಈ ಕಛೇರಿಯಿಂದ ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು.
3. ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳು (ಅನುತ್ತೀರ್ಣರಾಗಿ ಮತ್ತೆ ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳೂ ಸಹ ಸೇರಿದಂತೆ) ನಿಗದಿಪಡಿಸಲಾಗಿರುವ ಕೊನೆಯ ದಿನಾಂಕ ಅಥವಾ ಅದಕ್ಕಿಂತ ಮುಂಚಿತವಾಗಿ ತಾವು ವ್ಯಾಸಂಗ ಮಾಡಿರುವ ಕಾಲೇಜುಗಳಲ್ಲಿಯೇ ಪರೀಕ್ಷಾ ಶುಲ್ಕವನ್ನು ಕಟ್ಟಬೇಕು ಮತ್ತು ಪರೀಕ್ಷೆಯ ಅಭ್ಯರ್ಥನಾ ಪತ್ರವನ್ನು ಸಹ ಸಲ್ಲಿಸಬೇಕು. ***ವಿಶ್ವವಿದ್ಯಾನಿಲಯಕ್ಕೆ ನೇರವಾಗಿ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.***
4. ಪರೀಕ್ಷೆಗಳನ್ನು ಮುಂದೂಡಬೇಕೆಂದು ಬರುವ ಯಾವ ಬಗೆಯ ಮನವಿಯನ್ನು ಯಾವುದೇ ಕಾರಣಕ್ಕೂ ಪುರಸ್ಕರಿಸಲಾಗುವುದಿಲ್ಲ.
5. ಅಂಕಗಳ ಮರು ಮೌಲ್ಯಮಾಪನಕ್ಕಾಗಿ ಅರ್ಜಿಯನ್ನು ಸಲ್ಲಿಸಿರುವ ವಿದ್ಯಾರ್ಥಿಗಳು ಪರೀಕ್ಷೆಗೆ ಶುಲ್ಕವನ್ನು ಪಾವತಿಮಾಡಲು ನಿಗದಿಪಡಿಸಿದ ಕಡೆಯ ದಿನಾಂಕದೊಳಗೆ ಪರೀಕ್ಷಾ ಶುಲ್ಕಗಳನ್ನು ಪಾವತಿಮಾಡಬೇಕು ಮತ್ತು ಅಭ್ಯರ್ಥನ ಪತ್ರವನ್ನು ಸಲ್ಲಿಸಬೇಕು.
6. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.
7. ವಿಳಂಬವಾಗಿ (ಟಿ.ಎ.ಎಲ್) ಫಲಿತಾಂಶ ಪ್ರಕಟವಾಗುವ ವಿದ್ಯಾರ್ಥಿಗಳಿಗೆ ಅವರ ಫಲಿತಾಂಶವು ತಲುಪಿದ ದಿನಾಂಕದಿಂದ 7 ದಿವಸಗಳ ಅವಧಿಯೊಳಗೆ ಯಾವುದೇ ರೀತಿಯ ದಂಡಶುಲ್ಕವಿಲ್ಲದೆ ಪರೀಕ್ಷಾ ಶುಲ್ಕ ಕಟ್ಟಲು ಅನುಮತಿ ಇರುತ್ತದೆ.
8. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಇತ್ತೀಚಿನ ಭಾವಚಿತ್ರದ ಮೇಲೆ ಪೂರ್ತಿ ಸಹಿ ಮಾಡಿ ವಿದ್ಯಾರ್ಥಿಯನ್ನು ಗುರುತಿಸಲಾಗಿದೆ, ಎಂದು ಬರೆಯಿಸಿ ಪ್ರಾಂಶುಪಾಲರಿಂದ ಸಹಿ ಮಾಡಿಸಿ ಅವರ ಪ್ರವೇಶ ಪತ್ರಿಕೆಗೆ ಅಂಟಿಸಿ ಪರೀಕ್ಷಾ ಅರ್ಜಿಯೊಡನೆ ಕಾಲೇಜಿಗೆ ನೀಡಬೇಕು.

.....5

1. <u>ಭಾವಚಿತ್ರಗಳಿಲ್ಲದ ಪ್ರವೇಶಪತ್ರಗಳನ್ನು ಪರೀಕ್ಷಾ ಕೊಠಡಿಯಲ್ಲಿ ಹಾಜರುಪಡಿಸುವ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಕೇಂದ್ರದ ಪರೀಕ್ಷಾ ಮುಖ್ಯಾಧಿಕಾರಿಗಳು/ವಿಶ್ವವಿದ್ಯಾನಿಲಯದ ಅಧಿಕಾರಿಗಳು ಹಾಗೂ ತನಿಖಾಧಿಕಾರಿಗಳು ಪರೀಕ್ಷೆ ತೆಗೆದುಕೊಳ್ಳಲು ಅನುಮತಿ ಕೊಡುವುದಿಲ್ಲ.</u>

2. ಎಲ್ಲಾ ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿಯ ಜೊತೆಗೆ ತಾವು ಪರೀಕ್ಷೆ ತೆಗೆದುಕೊಂಡಿರುವ ಆಯಾ ಸೆಮಿಸ್ಟರ್/ವರ್ಷಕ್ಕೆ ಸಂಬಂಧಪಟ್ಟ ಪರೀಕ್ಷೆಗಳ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳನ್ನು ಮಾತ್ರ ಕಡ್ಡಾಯವಾಗಿ ಲಗತ್ತಿಸಬೇಕು.

## <u>ಪ್ರಾಂಶುಪಾಲರುಗಳಿಗೆ ಸಾಮಾನ್ಯ ಸೂಚನೆಗಳು:</u>

1. ಪರೀಕ್ಷಾ ಶುಲ್ಕಗಳನ್ನು ಕಟ್ಟಲು ಹಾಗೂ ಪರೀಕ್ಷೆ ತೆಗೆದುಕೊಳ್ಳುವುದಕ್ಕೆ ಬೇಕಾಗಿರುವ ಮಾಹಿತಿಯನ್ನು ವಿದ್ಯಾರ್ಥಿಗಳಿಂದ ಪಡೆಯಲು ಖಾಲಿ ಫಾರಂಗಳನ್ನು ಕಳುಹಿಸಲಾಗುವುದು. (ಪರೀಕ್ಷಾ ಅರ್ಜಿ ಫಾರಂಗಳು ನಿಮ್ಮಲ್ಲಿ ಲಭ್ಯವಿದ್ದಲ್ಲಿ ಅವುಗಳನ್ನೂ ಉಪಯೋಗಿಸಬಹುದು).

2. ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು Online ಮೂಲಕ ಎಂಟ್ರಿ ಮಾಡಿದ ನಂತರ ಕಾಲೇಜು ಹಂತದಲ್ಲಿಯೇ ಪ್ರವೇಶ ಪತ್ರಗಳನ್ನು ಮುದ್ರಿಸುವ ವ್ಯವಸ್ಥೆಯನ್ನು ಮಾಡಲಾಗುವುದು. ವಿದ್ಯಾರ್ಥಿಗಳ ಹಾಜರಾತಿ ಮತ್ತು ಪ್ರವೇಶಾತಿ ಅನುಮತಿಯನ್ನು ಪ್ರವೇಶಪತ್ರದಲ್ಲಿ ದೃಢೀಕರಿಸಿದ ನಂತರ ಕುಲಸಚಿವ (ಪರೀಕ್ಷಾಂಗ) ಅವರ ಮೇಲುಸಹಿಗಾಗಿ ಪರೀಕ್ಷೆ ಪ್ರಾರಂಭಕ್ಕಿಂತ ಮುಂಚಿತವಾಗಿ ಕಳುಹಿಸಬೇಕು.

3. ಪ್ರಾಯೋಗಿಕ ಪರೀಕ್ಷೆಗಳ ವೇಳಾಪಟ್ಟಿಯನ್ನು ಸಿದ್ಧಪಡಿಸುವಾಗ ಲಿಖಿತ ಪರೀಕ್ಷೆ ಮತ್ತು ಪ್ರಾಯೋಗಿಕ ಪರೀಕ್ಷೆ ಒಂದೇ ಸಮಯದಲ್ಲಿ ನಡೆಯದಂತೆ ನೋಡಿಕೊಳ್ಳುವುದು.

4. ಆನ್‌ಲೈನ್ ಮುಖಾಂತರ ಯಾವುದಾದರೂ ವಿದ್ಯಾರ್ಥಿಗಳ ಮಾಹಿತಿಯನ್ನು ಸಲ್ಲಿಸಲಾಗದೇ ಇದ್ದಲ್ಲಿ ಅಂತಹವರ ಪರೀಕ್ಷಾ ಅರ್ಜಿಗಳನ್ನು (ವಿದ್ಯಾರ್ಥಿ ಮತ್ತು ಪ್ರಾಂಶುಪಾಲರ ಸಹಿ ಹಾಕಿರಬೇಕು) ವಿಶ್ವವಿದ್ಯಾನಿಲಯಕ್ಕೆ **<u>ದಿನಾಂಕ 03.10.2015</u>** ರೊಳಗೆ ಸಲ್ಲಿಸಿ ಅಪ್‌ಡೇಟ್ ಮಾಡಿಸಿಕೊಳ್ಳಬೇಕು.

5. ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಮೊಹರುಮಾಡಿದ ಕವರುಗಳಲ್ಲಿ ಇಟ್ಟು ಕೇಂದ್ರದಲ್ಲಿ ನಡೆಯುವ ಎಲ್ಲಾ ವಿಷಯಗಳ ಪ್ರಾಯೊ ೀಗಿಕ (ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ಮುನ್ನ) ಪರೀಕ್ಷೆಗಳು ಮುಗಿದ ಮಾರನೇ ದಿನವೇ ಕಳುಹಿಸಬೇಕು. ಈ ದಿನಾಂಕ ಮೀರಿ ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಕಳುಹಿಸುವಂತಹ ಕಾಲೇಜುಗಳಿಗೆ/ಸಂಸ್ಥೆಗಳಿಗೆ ಸೇರಿದ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶಗಳು ತಡವಾಗಿ ಪ್ರಕಟವಾಗುವ ಸಂಭವವನ್ನು ತಪ್ಪಿಸಲು ಜಾಗರೂಕರಾಗಿರಲು ಕೋರಲಾಗಿದೆ. ಉತ್ತರ ಪತ್ರಿಕೆಗಳ ಕಟ್ಟುಗಳಲ್ಲಿ (Answer Book Bundles) ಅಂಕಪಟ್ಟಿಗಳನ್ನು ಕಳುಹಿಸಬಾರದೆಂದು ಸೂಚಿಸಲಾಗಿದೆ. ಅಂಕಪಟ್ಟಿಗಳನ್ನು ತಯಾರಿಸುವಾಗ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು (Register Number) ಪೂರ್ಣವಾಗಿ ಬರೆಯಬೇಕೆಂಬ ವಿಚಾರವನ್ನು ಎಲ್ಲಾ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು ಹಾಗೂ ಸಂಬಂಧಪಟ್ಟ ಪ್ರಾಯೋಗಿಕ ಪತ್ರಿಕೆಯ ನಿಖರವಾದ ಕೋಡ್ ನಂಬರನ್ನು ತಪ್ಪದೆ ಬರೆಯಬೇಕೆಂಬ ವಿಚಾರವನ್ನು ಸಹ ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು. ಪ್ರಾಯೋಗಿಕ ಪರೀಕ್ಷಕರಿಗೆ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು (Marks List) ಒದಗಿಸುವುದಕಿಂತ ಮೊದಲು ಆಯಾಯಾ ಕೇಂದ್ರದ ಮೊಹರನ್ನು (Seal) ಮಾರ್ಕ್ಸ್ ಲಿಸ್ಟ್‌ನ ಕೆಳಗಡೆ ಮಧ್ಯಭಾಗದಲ್ಲಿ ತಪ್ಪದೆ ಹಾಕಬೇಕು.

7. <u>ಸಬ್ಮಿಡಿಯರಿ ಪತ್ರಿಕೆಗಳನ್ನು ಕಾಲೇಜು ಹಂತದಲ್ಲೇ ಮೌಲ್ಯಮಾಪನ ಮಾಡಿಸುವ ವ್ಯವಸ್ಥೆಯನ್ನು ರದ್ದುಪಡಿಸಲಾಗಿದೆ. ಆದ್ದರಿಂದ, ಎಲ್ಲಾ ಸಬ್ಸಿಡಿಯರಿ ಪತ್ರಿಕೆಗಳ ಉತ್ತರಪತ್ರಿಕೆಗಳನ್ನು ಸಹ ಪರೀಕ್ಷೆ ಮುಗಿದ ನಂತರ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕು. ಅಂದರೆ ಕಾಲೇಜು ಹಂತದಲ್ಲಿ ಯಾವುದೇ ಥಿಯರಿ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಮಾಡಲು ಅವಕಾಶವಿರುವುದಿಲ್ಲ.</u>

ಕರಡು ಕು ಸಚಿವ (ಪರೀಕ್ಷಾಂಗ)
ಅವರಿಂದ ಅನುಮೋದಿಸಲ್ಪಟ್ಟಿದೆ.

ಕುಲಸಚಿವ (ಪರೀಕ್ಷಾಂಗ)
5-9-15

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಮೈಸೂರು, ಮಂಡ್ಯ ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು/ನಿರ್ದೇಶಕರು, ವಾಕ್ ಮತ್ತು ಶ್ರವಣ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು/ಜೆ.ಎಸ್.ಎಸ್. ಕಾಲೇಜು ವಾಕ್ ಮತ್ತು ಶ್ರವಣ ಸಂಸ್ಥೆ, ಜೆ.ಎಸ್.ಎಸ್ ಕಾಲೇಜು ಆವರಣ, ಊಟಿ ರಸ್ತೆ, ಮೈಸೂರು.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು-570 005.

.......6

3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಜಿಲ್ಲಾಧಿಕಾರಿಗಳ ಕಛೇರಿ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಇಲಾಖೆ, ಮೈಸೂರು/ಮಂಡ್ಯ/ಹಾಸನ/ಚಾಮರಾಜನಗರ ಜಿಲ್ಲೆ.
5. ಜಿಲ್ಲಾ ಖಜಾನಾಧಿಕಾರಿಗಳು,ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
6. ಆರಕ್ಷಕ ಅಧೀಕ್ಷಕರು, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
7. ನಿರ್ದೇಶಕರು, ವಿಶ್ವವಿದ್ಯಾನಿಲಯ ಮುದ್ರಣಾಲಯ, ಮಾನಸಗಂಗೋತ್ರಿ, ಮೈಸೂರು
8. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿ, ವಾರ್ತಾ ಭವನ, ಎಚ್.ಸಿ.ದಾಸಪ್ಪ ವೃತ್ತ, ಮೈಸೂರು – ಮೇಲ್ಕಂಡ ಪ್ರಕಟಣೆ ಮುಖ್ಯಾಂಶಗಳನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರ ಮಾಡಲು ಕೋರಿ 05 ಪ್ರತಿಗಳೊಂದಿಗೆ ಕಳುಹಿಸಲಾಗಿದೆ.
9. ನಿರ್ದೇಶಕರು, ಪ್ರಸಾರ ಭಾರತಿ ಕೇಂದ್ರ, ಯಾದವಗಿರಿ, ಮೈಸೂರು – ಈ ಅಧಿಸೂಚನೆಯ ಮುಖ್ಯಾಂಶಗಳನ್ನು ನಿಮ್ಮ ಬಾನುಲಿ ಹಾಗೂ ಟೀವಿ ವಾಹಿನಿ ಕೇಂದ್ರದಿಂದ ಕೆಲವು ಸಲ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಹಾಗೆ ಭಿತ್ತರಿಸಲು ಏರ್ಪಾಟನ್ನು ಮಾಡಲು ಕೋರಿದೆ.
10. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ, ಮಾನಸಗಂಗೋತ್ರಿ, ಮೈಸೂರು 570 006
11. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರ.
12. ಉಪಕುಲಸಚಿವರು (ಶೈಕ್ಷಣಿಕ) ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ,ಮೈಸೂರು 570 005.
14. ಶ್ರೀ.ಎಂ.ಟಿ.ವೇಣುಗೋಪಾಲ್, ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಐ.ಇ.ಎಂ ಕ್ಯಾಂಪ್ , ಪರೀಕ್ಷಾ ಭವನ, ಮೈಸೂರು.
15. ವ್ಯವಸ್ಥಾಪಕರು, ಇನ್ಸ್ಟ್ಯೂಟ್ ಆಫ್ ಇಂಜಿನಿಯರಿಂಗ್ ಅಂಡ್ ಮ್ಯಾನೇಜ್‌ಮೆಂಟ್, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
16. ಅಧ್ಯಕ್ಷರು, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು, – ಈ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
17. ಪರೀಕ್ಷಾ ವಿಭಾಗದ ಎಲ್ಲಾ ಅಧೀಕ್ಷಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
18. ಎಲ್ಲಾ ಕಾರ್ಯನಿರ್ವಾಹಕರು (ಸಾಮಾನ್ಯ ವಿಭಾಗ ಮತ್ತು ಸ್ನಾತಕಪದವಿ ವಿಭಾಗ) ಪರೀಕ್ಷಾ ವಿಭಾಗ, ಮೈಸೂರು ವಿ.ವಿ, ಮೈಸೂರು
19. ಆಪ್ತ ಸಹಾಯಕರು, ಕುಲಪತಿಗಳ/ಕುಲಸಚಿವರ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳು, ಮೈಸೂರು ವಿ.ವಿ, ಮೈಸೂರು.
20. ಕಛೇರಿ ಪ್ರತಿ.

ತಂತಿ ವಿಳಾಸ : ಯೂನಿರೆಜ್
ದೂರವಾಣಿ ಸಂಖ್ಯೆ : 2419677 : 2419361
ಫ್ಯಾಕ್ಸ್ : 0821-2419363/2419301

e-mail : registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ 406
ಮೈಸೂರು-570 005

REGISTRAR (Evaluation)
UNIVERSITY OF MYSORE,
MYSORE
8894
Ser. No.......
Regn. No......

ಸಂಖ್ಯೆ:[illegible]/34/90-91

ದಿನಾಂಕ: 31.12.2014

## ಅಧಿಸೂಚನೆ

ವಿಷಯ: ಎರಡುಪಟ್ಟು ಅವಧಿ ಮುಗಿದ ನಂತರ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪುನ: ಪರೀಕ್ಷೆ ಬರೆಯಲು ಅವಕಾಶ ನೀಡುವ ಬಗೆಗೆ.

ಉಲ್ಲೇಖ: ದಿನಾಂಕ 04.12.2014ರಂದು ನಡೆದ ಸಿಂಡಿಕೇಟ್ ಸಭೆಯ ನಿರ್ಣಯ.

-:-

ದಿನಾಂಕ 04-12-2014ರಂದು ನಡೆದ ಸಿಂಡಿಕೇಟ್ ಸಭೆಯ ತೀರ್ಮಾನದಂತೆ ಎಲ್ಲಾ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ಕೋರ್ಸುಗಳು (ಬಿ.ಇಡಿ. ಹಾಗೂ ಕಾನೂನು ಪದವಿಯ RR, CSS ಮತ್ತು ISS ಸ್ಕೀಂ ಸೇರಿದಂತೆ) ಮತ್ತು ಡಿಪ್ಲೊಮಾ ಕೋರ್ಸುಗಳಿಗೆ ಅನ್ವಯವಾಗುವಂತೆ **Double the duration** ಆದ ನಂತರ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪುನಃ ಪರೀಕ್ಷೆ ಬರೆಯಲು ಅಂತಿಮವಾಗಿ ಒಂದು ವರ್ಷದ ಅವಧಿಗೆ ( ಎರಡು ಪ್ರಯತ್ನಗಳು) ಅವಕಾಶವನ್ನು ಜನವರಿ-2015ರಿಂದ ಜಾರಿಗೆ ಬಂದಂತೆ ಕಾನೂನು ಪದವಿ ವಿದ್ಯಾರ್ಥಿಗಳಿಗೆ ಜನವರಿ 2015, ಮತ್ತು ಮೇ/ಜೂನ್ 2015 ರಲ್ಲಿ ನಡೆಯುವ ಪರೀಕ್ಷೆಗಳಿಗೆ ಎರಡು ಅವಕಾಶಗಳು ಹಾಗೂ ಉಳಿದ ಇನ್ನಿತರ ಪದವಿ ವಿದ್ಯಾರ್ಥಿಗಳಿಗೆ ಮೇ/ಜೂನ್ 2015ರಲ್ಲಿ ಮತ್ತು ನವೆಂಬರ್/ಡಿಸೆಂಬರ್ 2015ರಲ್ಲಿ ನಡೆಯುವ ಪರೀಕ್ಷೆಗಳಿಗೆ ಎರಡು ಪ್ರಯತ್ನಗಳಲ್ಲಿ ಪರೀಕ್ಷೆಯನ್ನು ಬರೆಯಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

ಈ ಅವಕಾಶವನ್ನು ಪ್ರಸ್ತುತ ನಡೆಸುವ ಪರೀಕ್ಷೆಗಳಿಗೆ ಆಯಾ ಸ್ಕೀಂಗಳು ಮುಕ್ತಾಯವಾಗುವ ಹಂತದಲ್ಲಿ ಬೋಧಿಸಲಾಗುತ್ತಿದ್ದ ಪಠ್ಯಕ್ರಮವನ್ನು ಅನುಸರಿಸಿ ಪರೀಕ್ಷೆ ಬರೆಯಲು ಅನುಮತಿಯನ್ನು ನೀಡಲಾಗಿದೆ ಎಂದು ಈ ಮೂಲಕ ತಿಳಿಸಲಾಗಿದೆ.

ಈ ಅಧಿಸೂಚನೆಯಲ್ಲಿ ನೀಡಲಾಗಿರುವ ಹೆಚ್ಚುವರಿ ಅವಕಾಶಕ್ಕೆ ಪರೀಕ್ಷಾ ಶುಲ್ಕವು ಸಾಮಾನ್ಯ ಪರೀಕ್ಷಾ ಶುಲ್ಕದ ನಾಲ್ಕು ಪಟ್ಟು ಆಗಿರುತ್ತದೆಂದು ಸಹಾ ತಿಳಿಯಪಡಿಸಲಾಗಿದೆ.

**ಕುಲಸಚಿವರಿಂದ ಕರಡು ಅನುಮೋದಿಸಿದೆ.**

31/12
ಉಪಕುಲಸಚಿವ (ಸಾಮಾನ್ಯ)
ಮೈಸೂರು ವಿಶ್ವವಿದ್ಯಾನಿಲಯ

ಇವರಿಗೆ:

1. ಕುಲಸಚಿವ (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು – [illegible] ಅಗತ್ಯ ಕ್ರಮಕೈಗೊಳ್ಳುವಂತೆ ಸೂಚಿಸಿದೆ.
2. ವಿಶ್ವವಿದ್ಯಾನಿಲಯದ ಆಡಳಿತಕ್ಕೊಳಪಟ್ಟ ಘಟಕ ಕಾಲೇಜುಗಳ ಹಾಗೂ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಇದನ್ನು ಸಂಬಂಧಿಸಿದ ವಿದ್ಯಾರ್ಥಿಗಳ ಗಮನಕ್ಕೆ ತರಬೇಕಾಗಿ ಕೋರಿದೆ.
3. ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳಿಗೆ, ಮಾನಸಗಂಗೋತ್ರಿ, ಮೈಸೂರು.
4. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಮಂಡ್ಯ, ಹಾಸನ.
5. ಸಂಯೋಜಕರು, ಉಪಗ್ರಹ ಕೇಂದ್ರ, ಚಾಮರಾಜನಗರ
6. ನಿರ್ದೇಶಕರು, ಪಿ.ಎಂ.ಇ.ಬಿ./ಕಾಲೇಜು ಅಭಿವೃದ್ಧಿ ಮಂಡಳಿ, ಮೈವಿವಿ, ಮೈಸೂರು
7. ನಿರ್ದೇಶಕರು,ಸಿ.ಎಫ್.ಟಿ.ಆರ್.ಐ./ಡಿ.ಎಫ್.ಆರ್.ಎಲ್./ಎ.ಐ.ಐ.ಎಸ್.ಎಚ್./ಸಿ.ಎಸ್.ಆರ್.ಟಿ.ಐ.,ಮೈಸೂರು.
8. ಪ್ರೊ.ಹೇಮಂತ್ ಕುಮಾರ್, ಅಧ್ಯಕ್ಷರು, ಗಣಕವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – ಈ ಸುತ್ತೋಲೆಯನ್ನು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್‌ಸೈಟನಲ್ಲಿ ಪ್ರಕಟಿಸಲು ಕೋರಿದೆ.
9. ಕುಲಪತಿಗಳ ಆಪ್ತಕಾರ್ಯದರ್ಶಿಗಳು, ಮೈವಿವಿ, ಮೈಸೂರು
10. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು
11. ಡಾ.ಎಂ.ಎನ್.ನರಸಿಂಹಮೂರ್ತಿ, ಸಂಖ್ಯಾಶಾಸ್ತ್ರಜ್ಞರು, ಪರೀಕ್ಷಾ ವಿಭಾಗ, ಮೈವಿವಿ, ಮೈಸೂರು
12. ಉಪ/ಸಹಾಯಕ ಕುಲಸಚಿವರು/ಅಧೀಕ್ಷಕರು/ಎಲ್ಲಾ ಕಾರ್ಯನಿರ್ವಾಹಕರು (ಶೈಕ್ಷಣಿಕ ವಿಭಾಗ), ಮೈವಿವಿ, ಮೈಸೂರು
13. ಉಪ/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮೈವಿವಿ, ಮೈಸೂರು (14) ರಕ್ಷಾ ಕಡತಕ್ಕೆ

ಸು. ac2s405

Ex8.4

02/01/15